ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ          ದಿನಾಂಕ : DATE : 19/11/20

## ಡಿ.7ರಿಂದ 15ರವರೆಗೆ ರಾಜ್ಯ ವಿಧಾನಮಂಡಲ ಅಧಿವೇಶನಕ್ಕೆ ನಿರ್ಧಾರ



ಬೆಂಗಳೂರು: ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು ಡಿ.7ರಿಂದ 15ರವರೆಗೆ ಬೆಂಗಳೂರಿನಲ್ಲಿ ನಡೆಸಲು ಬುಧವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆ ನಿರ್ಧರಿಸಿದೆ. ವಿವರ › 7


# ಡಿ.7ರಿಂದ ವಿಧಾನಮಂಡಲ ಅಧಿವೇಶನ

### ಡಿ. 7ರಿಂದ 15ರ ವರೆಗೂ ಬೆಂಗಳೂರಲ್ಲಿ ಅಧಿವೇಶನ | ಸಂಪುಟ ಸಭೆಯಲ್ಲಿ ನಿರ್ಧಾರ | ಸತತ 2ನೇ ವರ್ಷ ಬೆಳಗಾವಿಯಲ್ಲಿಲ್ಲ ಅಧಿವೇಶನ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಪ್ರಸಕ್ತ ಸಾಲಿನ ಚಳಿಗಾಲದ ವಿಧಾನಮಂಡಲ ಅಧಿವೇಶನವನ್ನು ಡಿಸೆಂಬರ್ 7ರಿಂದ 15ರವರೆಗೆ ಬೆಂಗಳೂರಿನಲ್ಲೇ ನಡೆಸಲು ಬುಧವಾರ ನಡೆದ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯಬೇಕಾಗಿದ್ದ ಚಳಿಗಾಲದ ಅಧಿವೇಶನ ಈ ಬಾರಿಯೂ ಬೆಂಗಳೂರಿನ ವಿಧಾನಸೌಧಕ್ಕೆ ಸ್ಥಳಾಂತರಗೊಂಡಿದೆ. ಸುವರ್ಣ ಸೌಧ ನಿರ್ಮಾಣದ ನಂತರ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ಆಯೋಜಿಸುವುದು ಸಂಪ್ರದಾಯದಂತೆ ನಡೆದುಕೊಂಡು ಬಂದಿತ್ತು. 2019ರಲ್ಲಿ ಬೆಳಗಾವಿ ತೀವ್ರವಾಗಿ ಪ್ರವಾಹಕ್ಕೆ ಒಳಗಾದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಅಧಿವೇಶನ ನಡೆಸಲಾಗಿತ್ತು. ಈಗ ಕೊರೋನಾ ಹಿನ್ನೆಲೆಯಲ್ಲಿ ಅಧಿವೇಶನವನ್ನು ಬೆಂಗಳೂರಿನಲ್ಲೇ ನಡೆಸಲು ಸರ್ಕಾರ ತೀರ್ಮಾನಿಸಿದೆ. ತನ್ಮೂಲಕ ಸತತ



ಎರಡನೇ ವರ್ಷವೂ ಬೆಳಗಾವಿಗೆ ಚಳಿಗಾಲದ ಅಧಿವೇಶನ ಕೈ ತಪ್ಪಿದಂತಾಗಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಸಚಿವ ಸಂಪುಟ ಸಭೆಯು 15 ನಿಮಿಷದಲ್ಲೇ ಮುಗಿದಿದ್ದು, ಚಳಿಗಾಲದ ಅಧಿವೇಶನದ ದಿನಾಂಕ ಹಾಗೂ ಸ್ಥಳ ನಿಗದಿ ಸೇರಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ.

## ಎಸ್ಸಿ, ಎಸ್ಟಿ ಮೀಸಲು ಹೆಚ್ಚಳಕ್ಕೆ ಸಂಪುಟ ಸಮಿತಿ

### ಎಸ್‌ಸಿ ಮೀಸಲು ಶೇ.15ರಿಂದ 17ಕ್ಕೆ, ಎಸ್‌ಟಿ ಮೀಸಲು ಶೇ.3ರಿಂದ 7ಕ್ಕೆ ಹೆಚ್ಚಳ: ಪರಾಮರ್ಶೆ

**ಬೆಂಗಳೂರು:** ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಜನ ಸಂಖ್ಯೆ ಆಧಾರದ ಮೇಲೆ ಹೆಚ್ಚಳ ಮಾಡುವ ಕುರಿತು ಪರಾಮರ್ಶೆ ನಡೆಸಿ ಸರ್ಕಾರಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ಉಪ ಸಮಿತಿ ರಚನೆಗೆ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3 ರಿಂದ ಶೇ.7ಕ್ಕೆಹೆಚ್ಚಳಮಾಡಬೇಕುಎಂಬಹೋರಾಟಗಳು ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ನ್ಯಾ. ನಾಗ ಮೋಹನ್ ದಾಸ್ ಅವರು ನೀಡಿರುವ ವರದಿಯನ್ನು ಆಧರಿಸಿ ಅಂತಿಮ ನಿರ್ಧಾರ ಕೈಗೊಳ್ಳಲು ಅಗತ್ಯ ಶಿಫಾರಸು ಮಾಡಲು ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಲಾಗಿದೆ.

**ಕೃಷಿ ಇಲಾಖೆ ನಿಯಮಗಳ ತಿದ್ದುಪಡಿಗೆ ಅಸ್ತು:** ಅಲ್ಲದೆ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ಕೃಷಿ ಸೇವೆ (ನೇಮಕಾತಿ) ನಿಯಮಗಳ ಕಾಯಿದೆಗೆ ತಿದ್ದುಪಡಿ ಮಾಡಲು ನಿರ್ಧರಿಸಲಾಗಿದೆ. 20 ವರ್ಷಗಳ ಬಳಿಕ ವೃಂದ ಮತ್ತು ನೇಮಕಾತಿ ನಿಯಮ ಪರಿಷ್ಕರಿಸಿದ್ದು, ಕೃಷಿ ಆಯುಕ್ತರು ಹಾಗೂ ಜಲಾನಯನ ಅಭಿವೃದ್ಧಿ ಆಯುಕ್ತರು ಎಂಬ ಹೊಸ ಹುದ್ದೆ ಸೃಷ್ಟಿಸಲಾಗಿದೆ. ಇನ್ನು ಸಹಾಯಕ ಕೃಷಿ ನಿರ್ದೇಶಕರ ಹುದ್ದೆ ನೇರ ನೇಮಕಾತಿ ಮತ್ತು ಮುಂಬಡ್ತಿ ಅನುಪಾತವನ್ನು 30:70 ಬದಲಾಗಿ 20:80 ರಂತೆ ನಿಗದಿಪಡಿಸಲಾಗಿದೆ.

**ಮುಂದಿನ ವರ್ಷ 21 ರಜೆ:** ರಾಜ್ಯದಲ್ಲಿ ಸರ್ಕಾರಿ ಉದ್ಯೋಗಿಗಳಿಗೆ 2021ರಲ್ಲಿ 21 ಸಾರ್ವತ್ರಿಕ ರಜೆಗಳು ಹಾಗೂ 19 ನಿರ್ಬಂಧಿತ ರಜೆಗಳಿಗೆ ಅನುಮೋದನೆ ನೀಡಲಾಗಿದೆ.